ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ	:	2072
ಸದಸ್ಯರ ಹೆಸರು	:	ಶ್ರೀ ಅಲ್ಲಂ ವೀರಭದ್ರಪ್ಪ (ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ	:	17.03.2022
ಉತ್ತರಿಸುವ ಸಚಿವರು	:	ಮಾನ್ಯ ಜಲಸಂಪನ್ಮೂಲ ಸಚಿವರು

ಕ್ರ ಸಂ.	ಪ್ರಶ್ನೆ	ಉತ್ತರ
ಅ)	ತುಂಗಭದ್ರ ಅಣೆಕಟ್ಟೆಯಲ್ಲಿ ಹೂಳು ತುಂಬಿರುವ ಹಿನ್ನೆಲೆಯಲ್ಲಿ ನೂರಾರು ಟಿಎಂಸಿ ನೀರನ್ನು ಮಳೆಗಾಲದ ಸಮಯದಲ್ಲಿ ಸಂಗ್ರಹಿಸಲು ಅನುಕೂಲವಾಗುವಂತೆ ನವಿಲೆ ಸಮೀಪ ಸಮತೋಲನ ಅಣೆಕಟ್ಟೆ ನಿರ್ಮಿಸುವ ಬಗ್ಗೆ ಡಿಪಿಆರ್ ಸಿದ್ದಪಡಿಸಲಾಗಿದೆಯೇ;	ತುಂಗಭದ್ರಾ ಜಲಾಶಯದ ಸಂಗ್ರಹಣಾ ಸಾಮರ್ಥ್ಯದ ಸಮಸ್ಯೆ ನೀಗಿಸಲು ಪರ್ಯಾಯ ಮಾರ್ಗೋಪಾಯವಾಗಿ, ನವಲಿ ಗ್ರಾಮದ ಹತ್ತಿರ ಸಮತೋಲನಾ ಜಲಾಶಯ ನಿರ್ಮಿಸುವ ಕಾಮಗಾರಿಯ ಯೋಜನಾ ವರದಿಯನ್ನು ತಯಾರಿಸುವ ಕನ್ಸಲ್ಟೆನ್ಸಿ ಅಂದಾಜು ಪಟ್ಟಿ ರೂ. 14.30 ಕೋಟಿ ಮೊತ್ತದ ಅಂದಾಜಿಗೆ ದಿನಾಂಕ:16.05.2020 ರಂದು ಆಡಳಿತಾತ್ಮಕ ಅನುಮೋದನೆ ನೀಡಲಾಗಿದ್ದು, ಯೋಜನೆಯ ವಿವರವಾದ ವರದಿಯನ್ನು ತಯಾರಿಸಲು ಸರ್ವೆ ಕಾರ್ಯ ಪ್ರಗತಿಯಲ್ಲಿರುತ್ತದೆ.
ಆ)	ಡಿಪಿಆರ್ ಸಿದ್ದಪಡಿಸಿದ್ದಲ್ಲಿ, ಈ ಯೋಜನೆಯ ಆಗುಹೋಗುಗಳ ಬಗ್ಗೆ ಮೊದಲಿಗೆ ಕಾಡಾ ಸಭೆಯಲ್ಲಿ ಚರ್ಚಿಸಿ ನಿರ್ಣಯಿಸಲು ಕ್ರಮ ಕೈಗೊಳ್ಳಲಾಗುವುದೇ;	ಯೋಜನೆಯ ವಿವರವಾದ ಯೋಜನಾ ವರದಿ ಸ್ವೀಕೃತವಾದ ನಂತರ ಅದರ ತಾಂತ್ರಿಕ ಶಕ್ಯತೆ ಮತ್ತು ಇತರೆ ಕಾರ್ಯ ಸಾಧ್ಯತೆಗಳ ಬಗ್ಗೆ ಸಂಬಂಧಪಟ್ಟವರೊಂದಿಗೆ ಚರ್ಚಿಸುವ ಬಗ್ಗೆ ಪರಿಶೀಲಿಸಲಾಗುವುದು.
ಇ)	ನಿರ್ಣಯದ ಸಂಬಂಧ ಆಂಧ್ರಪ್ರದೇಶದೊಂದಿಗೆ ಸರ್ಕಾರ ಮಾತುಕತೆ ನಡೆಸಿ ಯೋಜನೆಯನ್ನು ಅನುಷ್ಠಾನಗೊಳಿಸುವುದೇ?	ಮುಂದುವರೆದು, ಸದರಿ ಯೋಜನೆಯ ಬಗ್ಗೆ ತೆಲಂಗಾಣ ಹಾಗೂ ಆಂಧ್ರಪ್ರದೇಶ ರಾಜ್ಯಗಳೊಂದಿಗೆ ಸಮಾಲೋಚಿಸಿ ಅವರುಗಳ ಸಹಕಾರದೊಂದಿಗೆ ಯೋಜನೆಯನ್ನು ಅನುಷ್ಠಾನಗೊಳಿಸಲು ಕ್ರಮವಹಿಸಲಾಗುವುದು.

ಸಂಖ್ಯೆ: ಜಸಂಇ 86 ಎಂಎಲ್‌ಎ 2022

(ಗೋವಿಂದ ಎಂ.ಕಾರಜೋಳ)
ಜಲಸಂಪನ್ಮೂಲ ಸಚಿವರು